# ಕರ್ನಾಟಕ ಲೋಕಾಯುಕ್ತ

ನಂ.ಕಂಪ್ಲೆಂಟ್/ಉಪಲೋಕ್/ಜಿಎಲ್‌ಬಿ-142/2016/ಡಿಆರ್‌ಇ-1

ಬಹುಮಹಡಿಗಳ ಕಟ್ಟಡ,
ಡಾ:ಅಂಬೇಡ್ಕರ್ ವೀದಿ,
ಬೆಂಗಳೂರು.
ದಿನಾಂಕ: 22/1/2018

## ಕರ್ನಾಟಕ ಲೋಕಾಯುಕ್ತ ಕಾಯಿದೆ, 1984 ರ ಕಲಂ 12(1) ರನ್ವಯ ವರದಿ

ವಿಷಯ: ಶ್ರೀ.ಎಲ್.ಕೃಷ್ಣಮೂರ್ತಿ, ತಹಶೀಲ್ದಾರ್, ಕೂಡ್ಲಿಗಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, ಮತ್ತು (2) ಶ್ರೀ.ಬಿ.ಚನ್ನಬಸಪ್ಪ, ಉಪ ತಹಶೀಲ್ದಾರ್, ಹೊಸಹಳ್ಳಿ, ಕೂಡ್ಲಿಗಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರ ವಿರುದ್ಧ ಸಲ್ಲಿಸಿದ ದೂರಿನ ಸಂಬಂಧ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿನ ವರದಿ.

******

1. ಶ್ರೀ.ಆರ್.ಎಂ.ಪ್ರವೀಣ್‌ಕುಮಾರ್ ಬಿನ್ ಲೇಟ್.ಚಂದ್ರಶೇಖರಯ್ಯ, ಮರಬನಹಳ್ಳಿ ಗ್ರಾಮ, ಕೂಡ್ಲಿಗಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಇವರು (1) ಶ್ರೀ.ಎಲ್.ಕೃಷ್ಣಮೂರ್ತಿ, ತಹಶೀಲ್ದಾರ್, ಕೂಡ್ಲಿಗಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, ಮತ್ತು (2) ಶ್ರೀ.ಬಿ.ಚನ್ನಬಸಪ್ಪ, ಉಪ ತಹಶೀಲ್ದಾರ್, ಹೊಸಹಳ್ಳಿ, ಕೂಡ್ಲಿಗಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2. ಬಳ್ಳಾರಿ ಜಿಲ್ಲೆ, ಕೂಡ್ಲಿಗಿ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ರೈತರ ಕೃಷಿ ಜಮೀನುಗಳನ್ನು ಭೂ ಪರಿವರ್ತನೆ ಮಾಡದೆ ಕಾನೂನು ಬಾಹಿರವಾಗಿ ಖಾಸಗಿ ಕಂಪನಿಗಳಿಗೆ ಪವನ ವಿದ್ಯುತ್ ಸ್ಥಾವರಗಳನ್ನು ಸ್ಥಾಪಿಸಲು ಎದುರುದಾರರು ನೀಡಿರುತ್ತಾರೆ. ಕಾನೂನು ಉಲ್ಲಂಘಿಸಿ ಖಾಸಗಿ ಕಂಪನಿಯವರು ಕೆಲಸ ಮಾಡುವ ಬಗ್ಗೆ ಹಲವಾರು ಬಾರಿ ದೂರು ನೀಡಿದರೂ ಸಹ ಎದುರುದಾರರು ಯಾವುದೇ ಕ್ರಮವನ್ನು ಕೈಗೊಂಡಿಲ್ಲವೆಂದು ಆಪಾದಿಸಿ ದೂರನ್ನು ಸಲ್ಲಿಸಿರುತ್ತಾರೆ.

3. ದೂರುದಾರರ ದೂರಿನ ಮೇಲೆ ಆಕ್ಷೇಪಣೆಯನ್ನು ಸಲ್ಲಿಸುವಂತೆ ಎದುರುದಾರರಿಗೆ ಆದೇಶಿಸಲಾಗಿತ್ತು. 1 ಮತ್ತು 2ನೇ ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿದ್ದು, ಆಕ್ಷೇಪಣೆಯಲ್ಲಿ ದೂರುದಾರರ ದೂರಿಗೆ ಸಂಬಂಧಿಸಿದಂತೆ ಪರಿಶೀಲಿಸಲಾಗಿ, ಹೊಸಹಳ್ಳಿ ಹೋಬಳಿಯ ವಿವಿಧ ಗ್ರಾಮಗಳಲ್ಲಿ ವಿವಿಧ ಸರ್ವೆ ನಂಬರ್‌ಗಳ ಜಮೀನಿನಲ್ಲಿ ಪವನ್ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಮೆ:ವಿಶ್ ವಿಂಡ್ ಇನ್ಫ್ರಾಸ್ಟ್ರಕ್ಚರ್ ಎಲ್.ಎಲ್.ಪಿ, ಬೆಂಗಳೂರು, ರವರು ವಿವಿಧ ಗ್ರಾಮಗಳ ರೈತರುಗಳಿಂದ ಒಪ್ಪಿಗೆ ಮೇರೆಗೆ ವಿವಿಧ ಗ್ರಾಮಗಳಾದ ಹಿರೇಕುಂಳಗೂಂಟೆ ಸ.ನಂ.94/1 ರಲ್ಲಿ 1 ಎಕರೆ, ಸ.ನಂ.246/4 ರಲ್ಲಿ 0.50 ಸೆಂಟ್ಸ್ ಬಯಲುತುಂಬರಗಹುದ್ದಿ

ಸ.ನಂ.248ಬಿ ರಲ್ಲಿ 1.10 ಎಕರೆ, 33/2 ರಲ್ಲಿ 1.10 ಸೆಂಟ್ಸ್, 296ಎ ರಲ್ಲಿ 0.88 ಸೆಂಟ್ಸ್, 132 ರಲ್ಲಿ 1.25 ಎಕರೆ ಹಾಗೂ ಇನ್ನು ಇತರೆ ಸರ್ವೆ ನಂಬರ್‌ಗಳಲ್ಲಿ ನಿಯಮಾನುಸಾರ ಜಮೀನನ್ನು ಖರೀದಿಸಿ ಎಂಡ್ ಫ್ಯಾನ್ ಅಳವಡಿಸುತ್ತಿರುವುದು ಕಂಡುಬಂದಿರುತ್ತದೆ. ಈ ತಹಲ್‌ವರೆಗೂ ಈ ಬಗ್ಗೆ ರೈತರುಗಳಿಂದ ಯಾವುದೇ ದೂರು ಬಂದಿರುವುದಿಲ್ಲ. ಸರ್ಕಾರದ ಆದೇಶದನ್ವಯ ವಿವಿಧ ಗ್ರಾಮಗಳ ವಿವಿಧ ಸರ್ವೆ ನಂಬರ್‌ಗಳ ಜಮೀನಿನಲ್ಲಿ ಈ ಯೋಜನೆಗೆ 28.00 ಎಕರೆ ಜಮೀನನ್ನು ಮಂಜೂರು ಮಾಡಿರುತ್ತಾರೆ. ಸದರಿ ಕಂಪನಿಯವರು ಸಂಬಂಧಿಸಿದವರಿಂದ ಕರ್ನಾಟಕ ಭೂಸುಧಾರಣಾ ಕಾಯ್ದೆ 1961 ರ ನಿಯಮ 109 ರಡಿ ಸಂಬಂಧಪಟ್ಟ ಅಧಿಕಾರಿಗಳಿಂದ ನಿಯಮಾನುಸಾರ ಅನುಮತಿ ಪಡೆಯಲು ಪ್ರಸ್ತಾವನೆಗಳು ಸಲ್ಲಿಕೆಯಾಗುತ್ತಿರುತ್ತವೆ. ತಹಶೀಲ್ದಾರ್ ಕಚೇರಿಯಿಂದ ಯಾವುದೇ ರೀತಿಯ ಅನುಮತಿ ನೀಡಿರುವುದಿಲ್ಲ. ಪವನ ವಿದ್ಯುತ್ ಸ್ಥಾವರ ಸ್ಥಾಪಿಸಲು ಭೂ ಪರಿವರ್ತನೆ ಅವಶ್ಯಕತೆ ಇರುವುದಿಲ್ಲ ಎಂದು ಹೇಳಿರುತ್ತಾರೆ.

4. ಎದುರುದಾರರು ತನ್ನ ಆಕ್ಷೇಪಣೆಯ ಜೊತೆ ದಿ.20/11/15 ರಂದು ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ಭೂ ಮಂಜೂರಾತಿ-3) ಇವರು ಮಾಡಿರುವ ಆದೇಶದ ಪ್ರತಿಯನ್ನು ಹಾಜರು ಪಡಿಸಿರುತ್ತಾರೆ. ಅದನ್ನು ಪರಿಶೀಲಿಸಿದಾಗ, ಬಳ್ಳಾರಿ ಜಿಲ್ಲೆ ಕೂಡ್ಲಿಗಿ ತಾಲ್ಲೂಕು, ಹೊಸಹಳ್ಳಿ ಹೋಬಳಿಯ ವಿವಿಧ ಗ್ರಾಮಗಳ ವಿವಿಧ ಸರ್ವೆ ನಂಬರ್‌ಗಳಲ್ಲಿ ಒಟ್ಟು 28.00 ಎಕರೆ ಸರ್ಕಾರಿ ಜಮೀನನ್ನು ಪವನ ವಿದ್ಯುತ್ ಯೋಜನೆ ಸ್ಥಾಪಿಸುವ ಸಲುವಾಗಿ ಗುತ್ತಿಗೆ ಆಧಾರದ ಮೇಲೆ ಮಂಜೂರು ಮಾಡಿ ಆದೇಶಿಸಿರುವುದು ಕಂಡುಬರುತ್ತದೆ. ಆದರೆ ದೂರುದಾರರು ತಮ್ಮ ದೂರಿನಲ್ಲಿ ಕೃಷಿ ಜಮೀನಿನಲ್ಲಿ ಕಾನೂನು ಬಾಹಿರವಾಗಿ ಖಾಸಗಿ ಕಂಪನಿಯವರು ಸ್ಥಾವರ ಸ್ಥಾಪಿಸುತ್ತಿದ್ದಾರೆಂದು ಆಪಾದಿಸಿರುವುದರಿಂದ, ದೂರುದಾರರ ದೂರಿನ ಬಗ್ಗೆ ವಿಚಾರಣೆ ನಡೆಸಿ ವರದಿ ನೀಡುವಂತೆ ಪೊಲೀಸ್ ಅಧೀಕ್ಷಕರು, ಲೋಕಾಯುಕ್ತ, ಬಳ್ಳಾರಿ, ಇವರಿಗೆ ಆದೇಶಿಸಲಾಗಿತ್ತು.

5. ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಬಳ್ಳಾರಿ ಇವರು ವರದಿಯನ್ನು ಸಲ್ಲಿಸಿದ್ದು, ಈ ಕೆಳಗಿನಂತೆ ವರದಿಯನ್ನು ಸಲ್ಲಿಸಿರುತ್ತಾರೆ.

i. ಅರ್ಜಿದಾರರು ಆರೋಪಿಸಿರುವಂತೆ ವಿಂಡ್ ವರ್ಲ್ಡ್ (ಇಂಡಿಯಾ) ಲಿಮಿಟೆಡ್ ಕಂಪನಿಯು ಯಾವುದೇ ಭೂಪರಿವರ್ತನೆಯಾಗದೆ ಪ್ರಾರಂಭವಾಗಿರುವುದು ದೃಢಪಡುತ್ತದೆ. ರೈತರ ಕೃಷಿ ಭೂಮಿಯನ್ನು ಕಂಪನಿಯು ಕ್ರಯ ಅಥವಾ ಜಿ.ಪಿ.ಎ. ಮೂಲಕ ಮಾಡಿಕೊಂಡಿರುವುದು ದಾಖಲಾತಿ ಪರಿಶೀಲನೆಯಿಂದ ದೃಢಪಟ್ಟಿರುತ್ತದೆ.

ii. ಅರ್ಜಿದಾರರು ಆರೋಪಿಸಿರುವಂತೆ ವಿಂಡ್ ವರ್ಲ್ಡ್ (ಇಂಡಿಯಾ) ಲಿಮಿಟೆಡ್ ಕಂಪನಿಯು 2015-16ನೇ ಸಾಲಿನಿಂದ ಭೂ ಪರಿವರ್ತನೆಯಾಗದೆ ಪ್ರಾರಂಭಿಸಿದ್ದರೂ ಕಂಪನಿಯ ವಿರುದ್ಧ ತಹಶೀಲ್ದಾರ್, ಕೂಡ್ಲಿಗಿ ಇವರು ಯಾವುದೇ ಕ್ರಮ ಕೈಗೊಳ್ಳದಿರುವುದು ತಹಶೀಲ್ದಾರ್, ಕೂಡ್ಲಿಗಿ ಇವರ ಹೇಳಿಕೆಯಿಂದ ದೃಢಪಟ್ಟಿರುತ್ತದೆ.

iii. ಅರ್ಜಿದಾರರು ಆರೋಪಿಸಿರುವಂತೆ ಕಂಪನಿಯು ರೈತರ ಕೃಷಿ ಭೂಮಿಯನ್ನು ಭೂ ಪರಿವರ್ತನೆಯಾಗದೆ ಪ್ರಾರಂಭಿಸಿರುವುದು ಕಂಪನಿಯ ಮುಖ್ಯ ವ್ಯವಸ್ಥಾಪಕರ ಹೇಳಿಕೆಯಿಂದ ದೃಢಪಡುತ್ತದೆ.

iv. ಅರ್ಜಿದಾರರು ಆರೋಪಿಸಿರುವಂತೆ ವಿಂಡ್ ವರ್ಲ್ಡ್ (ಇಂಡಿಯಾ) ಕಂಪನಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಬದಲು ರಾತ್ರೋರಾತ್ರಿ ಕೆಲಸ ಪ್ರಾರಂಭಿಸಿರುವುದಾಗಿ ಬೇಜವಾಬ್ದಾರಿ ಹೇಳಿಕೆಯನ್ನು ಕಂದಾಯ ನಿರೀಕ್ಷಕರು ನೀಡಿರುವುದು ಕಂಪನಿಗೆ ಅನುಕೂಲ ಮಾಡಿಕೊಟ್ಟಿರುವುದು ಮೇಲ್ನೋಟಕ್ಕೆ ದೃಢಪಟ್ಟಿರುತ್ತದೆ.

v. ಕಂಪನಿಯು ಅನಧಿಕೃತವಾಗಿ ಪ್ರಾರಂಭಿಸಿರುವುದನ್ನು ಗ್ರಾಮ ಲೆಕ್ಕಾಧಿಕಾರಿಗಳು ಕಂದಾಯ ನಿರೀಕ್ಷಕರಿಗೆ ಹಾಗೂ ತಹಶೀಲ್ದಾರ್‌ರವರಿಗೆ ತಿಳಿಸಿದ್ದರೂ ಸಹ ತಹಶೀಲ್ದಾರ್‌ರವರು ಯಾವುದೇ ಕ್ರಮ ಕೈಗೊಳ್ಳದಿರುವುದು ಕಂಡುಬಂದಿರುತ್ತದೆ.

vi. ವಿಂಡ್ ವರ್ಲ್ಡ್ (ಇಂಡಿಯಾ) ಲಿಮಿಟೆಡ್ ಕಂಪನಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವುದು ಸ್ಥಳ ಪರಿಶೀಲನೆಯಿಂದ ದೃಢಪಡುತ್ತದೆ.

6. ಅರ್ಜಿ ವಿಚಾರಣೆಯಿಂದ ಮಾನ್ಯ ಸಹಾಯಕ ಆಯುಕ್ತರು ಹೊಸಪೇಟೆ ಇವರ ವರದಿಯಂತೆ ವಿಂಡ್ ವರ್ಲ್ಡ್ (ಇಂಡಿಯಾ) ಲಿಮಿಟೆಡ್ ಕಂಪನಿಯವರು ರೈತರ ಕೃಷಿ ಭೂಮಿಯನ್ನು ಖರೀದಿ ಕ್ರಯ/ಜಿಪಿ.ಎ ಮೂಲಕ ಒಪ್ಪಂದ ಮಾಡಿಕೊಂಡಿದ್ದು, ಭೂಪರಿವರ್ತನೆಯಾಗುವ ಮೊದಲು ಪ್ರಾರಂಭಿಸಿರುವುದು ಕಂಡುಬರುತ್ತದೆ. ವಿಂಡ್ ವರ್ಲ್ಡ್ (ಇಂಡಿಯಾ) ಲಿಮಿಟೆಡ್ ಕಂಪನಿಯು ಕಂದಾಯ ಇಲಾಖೆಯ ಅನುಮತಿ ಪಡೆಯದೆ ಪ್ರಾರಂಭಿಸಿದ್ದರೂ ಅವರ ವಿರುದ್ಧ ಯಾವುದೇ ಕ್ರಮವನ್ನು ತೆಗೆದುಕೊಳ್ಳದೆ ತಹಶೀಲ್ದಾರ್, ಕೂಡ್ಲಿಗಿ ಹಾಗೂ ಕಂದಾಯ ನಿರೀಕ್ಷಕರು ಕರ್ತವ್ಯದಲ್ಲಿ ನಿರ್ಲಕ್ಷ್ಯತನ ಮಾಡಿರುವುದು ಕಂಡುಬರುತ್ತದೆ. ಕಂಪನಿಯ ಕಾರ್ಯ ಚಟುವಟಿಕೆಗಳನ್ನು ನಿಲ್ಲಿಸಬೇಕಾದ ಅಧಿಕಾರಿಯ ಗಮನಕ್ಕೆ ಬಂದಿದ್ದರೂ ಸಹಿತ ಯಾವುದೇ ಕಾನೂನಾತ್ಮಕ ಕ್ರಮ ಕೈಗೊಳ್ಳದಿರುವುದು ಕಂಡುಬರುತ್ತದೆ. ರೈತರ ಕೃಷಿ ಭೂಮಿಯನ್ನು ಭೂ ಪರಿವರ್ತನೆಯಾಗುವ ಮೊದಲು ಸರ್ಕಾರದ ನಿಯಮಗಳನ್ನು ಉಲ್ಲಂಘಿಸಿ ಕಂಪನಿಯ ಕಾರ್ಯ ಚಟುವಟಿಕೆಗಳನ್ನು ಪ್ರಾರಂಭಿಸಿರುವ ವಿಂಡ್ ವರ್ಲ್ಡ್ (ಇಂಡಿಯಾ) ಲಿಮಿಟೆಡ್ ಕಂಪನಿಯ ವಿರುದ್ಧ ಹಾಗೂ ಕರ್ತವ್ಯದಲ್ಲಿ ನಿರ್ಲಕ್ಷ್ಯತನ ಮಾಡಿರುವ ತಹಶೀಲ್ದಾರ್, ಕೂಡ್ಲಿಗಿ ಮತ್ತು ಕಂದಾಯ ನಿರೀಕ್ಷಕರು, ಹೊಸಹಳ್ಳಿ ಹೋಬಳಿ, ಇವರ ವಿರುದ್ಧ ಕ್ರಮ ಜರುಗಿಸಲು ಕೋರಿ ವರದಿಯನ್ನು ಸಲ್ಲಿಸಿರುತ್ತಾರೆ.

7. 1 ಮತ್ತು 2ನೇ ಎದುರುದಾರರು ಆಕ್ಷೇಪಣೆಯಲ್ಲಿ ಕರ್ನಾಟಕ ಭೂಸುಧಾರಣಾ ಕಾಯಿದೆ 1961 ರ ನಿಯಮ 109 ರಡಿ ಸಂಬಂಧಪಟ್ಟ ಅಧಿಕಾರಿಗಳಿಂದ ನಿಯಮಾನುಸಾರ ಅನುಮತಿ ಪಡೆಯಲು ಪ್ರಸ್ತಾವನೆಗಳು ಸಲ್ಲಿಕೆಯಾಗುತ್ತಿರುತ್ತವೆ. ತಹಶೀಲ್ದಾರ್ ಕಚೇರಿಯಿಂದ ಯಾವುದೇ ರೀತಿಯ ಅನುಮತಿ ನೀಡಿರುವುದಿಲ್ಲ. ಪವನ ವಿದ್ಯುತ್ ಸ್ಥಾವರ ಸ್ಥಾಪಿಸಲು ಭೂ ಪರಿವರ್ತನೆ ಅವಶ್ಯಕತೆ ಇರುವುದಿಲ್ಲವೆಂದು ಹೇಳಿರುತ್ತಾರೆ. ಭೂ ಸುಧಾರಣೆ ಕಾಯಿದೆ ನಿಯಮ 109 ರಡಿಯಲ್ಲಿ ಕಂಪನಿಯವರು ಯಾವುದೇ ಅನುಮತಿಯನ್ನು ಪಡೆಯದಿರುವುದು ಎದುರುದಾರರ ಗಮನಕ್ಕೆ

ಬಂದಿರುವುದು ಅವರ ಆಕ್ಷೇಪಣೆಯಲ್ಲಿ ಕಂಡುಬರುತ್ತದೆ. ದಿ.3/4/17 ರಂದು ಆದ ಸರ್ಕಾರದ ನಡವಳಿಯನ್ನು ಗಮನಿಸಿದಾಗ, ಪವನ ವಿದ್ಯುತ್ ಯೋಜನೆಗೆ ಜಮೀನನ್ನು ಮಂಜೂರು ಮಾಡುವಾಗ ಸದರಿ ಜಮೀನನ್ನು ಕರ್ನಾಟಕ ಭೂ ಸುಧಾರಣೆ ಕಾಯಿದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂ ಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು ಎಂದು ಷರತ್ತನ್ನು ವಿಧಿಸಿರುವುದು ಕಂಡುಬರುತ್ತದೆ. ಅದನ್ನು ಗಮನಿಸಿದಾಗ, ಅನುಮತಿ ಪಡೆಯದೆ ಹಾಗೂ ಭೂ ಪರಿವರ್ತನೆಯಾಗದೆ ವಿದ್ಯುತ್ ಸ್ಥಾವರವನ್ನು ಸ್ಥಾಪಿಸಲು ಅವಕಾಶ ಮಾಡಿಕೊಟ್ಟು ಎದುರುದಾರರು ಕರ್ತವ್ಯಲೋಪ ಎಸಗಿರುವುದು ಕಂಡುಬರುತ್ತದೆ.

8. ಮೇಲ್ಕಂಡ ಹಿನ್ನೆಲೆಯಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ, 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕಂದಾಯ ಇಲಾಖೆಯಿಂದ ಅನುಮತಿ ಪಡೆಯದೆ ಹಾಗೂ ಭೂ ಪರಿವರ್ತನೆಯಾಗದೆ ವಿದ್ಯುತ್ ಸ್ಥಾವರವನ್ನು ಸ್ಥಾಪಿಸಿ commercial activity ನಡೆಸುತ್ತಿರುವ ಸಂಸ್ಥೆಯ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ಈ ಮೂಲಕ ಶಿಫಾರಸ್ಸು ಮಾಡಲಾಗಿರುತ್ತದೆ. ತದನಂತರ ಸಕ್ಷಮ ಪ್ರಾಧಿಕಾರವು ಈ ಸಂಸ್ಥೆಗೆ ಅಲ್ಲಿಂದ **ಒಂದು ತಿಂಗಳೊಳಗೆ** ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(2) ರಡಿಯಲ್ಲಿ ಕೈಗೊಳ್ಳಲಾದ ಕ್ರಮದ ಬಗ್ಗೆ ವರದಿ ಸಲ್ಲಿಸುವುದು

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

(ನ್ಯಾಯಮೂರ್ತಿ ಸುಭಾಷ್ ಬಿ. ಆಡಿ)
ಉಪಲೋಕಾಯುಕ್ತರು-2,
ಕರ್ನಾಟಕ ರಾಜ್ಯ, ಬೆಂಗಳೂರು.